ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 23/9/2020

# ಕೃಷಿ ತಿದ್ದುಪಡಿಗೆ ಬಲವಂತದ ಅಂಗೀಕಾರ

**ಬೆಂಗಳೂರು:** ಸಂಸತ್ತಿನಲ್ಲಿ ಪ್ರತಿಪಕ್ಷಗಳ ಅಭಿವ್ಯಕ್ತಿ ಸ್ವಾತಂತ್ರ್ಯದ ಕೊರಳು ಹಿಚುಕಿ ಕೃಷಿ ಉತ್ಪನ್ನ ಮಾರಾಟ ಮತ್ತು ವಾಣಿಜ್ಯ ವಿಧೇಯಕಕ್ಕೆ ಬಲಾತ್ಕಾರದಿಂದ ಅಂಗೀಕಾರ ಪಡೆಯಲಾಗಿದೆ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಆರೋಪಿಸಿದ್ದಾರೆ.



''ಕೊರೊನಾ ನಿಯಂತ್ರಿಸಲಾಗದೇ ದೇಶದ ಜನರನ್ನು ಸಾವು-ನೋವಿನ ದವಡೆಗೆ ನೂಕುತ್ತಿರುವ ಅಸಮರ್ಥ ಕೇಂದ್ರ ಸರಕಾರ ಕೊರೊನೋತ್ತರ ಭಾರತದ ಏಕೈಕ ಆಶಾಕಿರಣವಾದ ಕೃಷಿ ಕ್ಷೇತ್ರವನ್ನು ಸರ್ವನಾಶ ಮಾಡಲು ಹೊರಟಿದೆ. ವಿಧೇಯಕವನ್ನು ಆಯ್ಕೆ ಸಮಿತಿಯ ಪರಿಶೀಲನೆಗೊಳಪಡಿಸಬೇಕೆಂಬ ಪ್ರತಿಪಕ್ಷಗಳ ಬೇಡಿಕೆಗೆ ಕೇಂದ್ರ ಹಿಂದೇಟು ಹಾಕುತ್ತಿರುವುದು ಯಾಕೆ,'' ಎಂದು ಪ್ರಶ್ನಿಸಿದ್ದಾರೆ.

''ಎಪಿಎಂಸಿಗಳ ನಿಯಂತ್ರಣವಿಲ್ಲದೆ ಸ್ವತಂತ್ರ ವ್ಯಾಪಾರ ನಡೆಸುವ ಅವಕಾಶಕ್ಕಾಗಿ ಪ್ರಯತ್ನಿಸುತ್ತಲೇ ಬಂದಿರುವ ಖಾಸಗಿ ಕಂಪನಿಗಳಿಗೆ ಹೆಬ್ಬಾಗಿಲು ತೆರೆಯುವುದೇ ಕೃಷಿ ವಿಧೇಯಕದ ದುರುದ್ದೇಶ. ಇದು ರೈತರಿಗೆ ತೊಂದರೆ ನೀಡುವ ಮನೆಹಾಳು ಕೆಲಸ. ಎಪಿಎಂಸಿಗಳನ್ನು ಖಾಸಗಿ ದಣಿಗಳ ಪಾದಕ್ಕೊಪ್ಪಿಸಿ ರೈತರನ್ನು ಜೀತದಾಳುಗಳನ್ನಾಗಿ ಮಾಡಲಾಗುತ್ತಿದೆ,'' ಎಂದು ಅಭಿಪ್ರಾಯಪಟ್ಟಿದ್ದಾರೆ.

''ಹೊಸ ತಿದ್ದುಪಡಿ ಕಾನೂನಿನಲ್ಲಿ ಬೆಂಬಲ ಬೆಲೆ ರಕ್ಷಣೆ ಕಿತ್ತೊಗೆಯಲಾಗಿದೆ. ರೈತರನ್ನು ಅನಾಥರನ್ನಾಗಿ ಮಾಡಲಾಗಿದೆ. ಕಯಿದೆ ಜಾರಿಗೆ ಬಂದ ನಂತರ ರಾಜ್ಯಗಳಿಗೆ ಎಂಪಿಎಂಸಿಯಿಂದ ಹೊರಗಿರುವ ವರ್ತಕರ ಮೇಲೆ ಯಾವ ನಿಯಂತ್ರಣವೂ ಇರುವುದಿಲ್ಲ.ಅವರ ವ್ಯವಹಾರದ ಮೇಲೆ ನಿಗಾ ಇಡುವಂತಿಲ್ಲ, ಶುಲ್ಕ,ಸೆಸ್,ಲೆವಿ ಸಂಗ್ರಹಿಸುವಂತಿಲ್ಲ. ಇದು ಸರಕಾರದ ಸಂಪೂರ್ಣ ಶರಣಾಗತಿ,'' ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

''ರಾಜ್ಯದಲ್ಲಿ ಅನುಷ್ಠಾನದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಕಾಯಿದೆ ರೈತರ ಹಿತಾಸಕ್ತಿ ರಕ್ಷಣೆಗೆ ಬದ್ಧವಾಗಿದೆ. ಸೆಕ್ಷನ್ 8 ರ ಪ್ರಕಾರ ''ಎಪಿಎಂಸಿ ಮಾರುಕಟ್ಟೆ ಯಾರ್ಡ್ ಒಳಗೆ ಇಲ್ಲವೆ ಹೊರಗೆ ಯಾರೂ ಕೂಡಾ ಅಧಿಕೃತ ಲೈಸೆನ್ಸ್ ಇಲ್ಲದೆ ವ್ಯಾಪಾರ ನಡೆಸುವಂತಿಲ್ಲ. ಸೆಕ್ಷನ್ 66 ಮತ್ತು 67ರ ಪ್ರಕಾರ ಎಪಿಎಂಸಿಯಲ್ಲಿ ಅಕ್ರಮ ವ್ಯಾಪಾರ,ಕಾಳಸಂತೆ ಮತ್ತು ಅಕ್ರಮ ದಾಸ್ತಾನು ನಿಯಂತ್ರಿಸಲು ಅವಕಾಶವಿದೆ. ಇದಕ್ಕೂ ತಿದ್ದುಪಡಿ ಮಾಡಲಾಗಿದೆ. ರೈತರಿಗೆ ನ್ಯಾಯಬದ್ಧ ಬೆಲೆ ಸಿಗುವಂತೆ ಮಾಡಲು ಖಾಸಗಿ ಸಂಸ್ಥೆಗಳ ಲೆಕ್ಕಪತ್ರ ಪರಿಶೀಲಿಸಬಹುದು. ಸೆಕ್ಷನ್ 114,116 ಮತ್ತು 117ರಡಿಯಲ್ಲಿ ತಪ್ಪಿತಸ್ಥರಿಗೆ ಆರು ತಿಂಗಳ ಜೈಲು ಶಿಕ್ಷೆ ಮತ್ತು ದಂಡ ವಿಧಿಸುವ ಅವಕಾಶ ಇದೆ. ಈ ಆರೂ ಸೆಕ್ಷನ್ ಗಳನ್ನು ಬದಲಿಸಲು ನಿರ್ಧರಿಸಿವೆ,'' ಎಂದು ಕಳವಳ ವ್ಯಕ್ತಪಡಿಸಿದರು.